# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 43 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು: ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) | (see table below) |

| ಜಿಲ್ಲೆ/ವಲಯ | ಪ್ರಾಥಮಿಕ | ಪ್ರೌಢ |
|---|---|---|
| **TUMAKURU** | **1992** | **132** |
| CHIKNAYAKANHALLI | 301 | 19 |
| GUBBI | 378 | 25 |
| KUNIGAL | 327 | 30 |
| TIPTUR | 259 | 16 |
| TUMKUR | 468 | 25 |
| TURUVEKERE | 259 | 17 |
| **TUMAKURU MADHUGIRI** | **1243** | **95** |
| KORATAGERE | 254 | 19 |
| MADHUGIRI | 343 | 27 |
| PAVAGADA | 229 | 21 |
| SIRA | 417 | 28 |
| Total | **3235** | **227** |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಆ ಪೈಕಿ ಶೌಚಾಲಯದ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) | ಬಂದಿದೆ.<br>ತುಮಕೂರು ಜಿಲ್ಲೆಯಲ್ಲಿ ಕೊರಟಗೆರೆ ಹಾಗೂ ಪಾವಗಡ ತಾಲ್ಲೂಕಿನ 4 ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇರುವುದಿಲ್ಲ. ಸದರಿ ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಕಲ್ಪಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ. |

| ತಾಲ್ಲೂಕು | ಶೌಚಾಲಯ ವ್ಯವಸ್ಥೆ ಕಲ್ಪಿಸಲು ಕೈಗೊಂಡಿರುವ ಕ್ರಮ |
|---|---|
| ಕೊರಟಗೆರೆ | ಸ.ಕಿ.ಪ್ರಾ ಶಾಲೆ, ಶ್ರೀರಾಮನಹಳ್ಳಿ ಈ ಶಾಲೆಯನ್ನು 2021–22ನೇ ಸಾಲಿನ ರಾಜ್ಯ ವಲಯ ಮತ್ತು ನರೇಗಾ ಯೋಜನೆಯಡಿಯಲ್ಲಿ ಶೌಚಾಲಯ ನಿರ್ಮಾಣ ಕಾಮಗಾರಿ ಮಂಜೂರು ಮಾಡಲಾಗಿದೆ, ಕಾಮಗಾರಿ ಪ್ರಗತಿಯಲ್ಲಿದೆ. |

| | | | |
|---|---|---|---|
| | | | |
| | | ಪಾವಗಡ | ಸ.ಕಿ.ಪ್ರಾ ರಾಮಕೃಷ್ಣಾಪುರ ಮತ್ತು ಸ.ಹಿ.ಪ್ರಾ ಶಾಲೆ, ಜಂಗಮರಹಳ್ಳಿ ಈ ಶಾಲೆಗಳನ್ನು 2021-22 ನೇ ಸಾಲಿನ ನರೇಗಾ ಮತ್ತು ರಾಜ್ಯ ವಲಯ ಯೋಜನೆಯಡಿಯಲ್ಲಿ ಶೌಚಾಲಯ ನಿರ್ಮಾಣ ಕಾಮಗಾರಿ ಮಂಜೂರು ಮಾಡಲಾಗಿದೆ, ಕಾಮಗಾರಿ ಪ್ರಗತಿಯಲ್ಲಿದೆ.<br>ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಪಾವಗಡ ಟೌನ್ ಈ ಶಾಲೆಗೆ 2022-23 ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದನೆ ನೀಡಲು ಕ್ರಮವಹಿಸಲಾಗಿದೆ. |
| ಇ) | ಹಾಗಿದ್ದಲ್ಲಿ, ಶಾಲೆಗಳಲ್ಲಿ ಶೌಚಾಲಯದ ವ್ಯವಸ್ಥೆ ಕಲ್ಪಿಸುವ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | • 2020-21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ಮನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಠಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ.2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. (ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ)<br>• 2021-22ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ 3500.00ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. 3500.00ಲಕ್ಷ ರೂಗಳ ಅನುದಾನ ಬಿಡುಗಡೆ ಮಾಡಲಾಗಿದೆ. (ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-2ರಲ್ಲಿ** ಲಗತ್ತಿಸಿದೆ)<br>• 2021-22ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯ ಯೋಜನೆ ಅಡಿಯಲ್ಲಿ ಆಯ್ದ 750 ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯ ಇತ್ಯಾದಿ ಸಮಗ್ರ ಸೌಲಭ್ಯ ಒದಗಿಸಲು ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.75.00ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಯೋಜನೆಯಲ್ಲಿ ಶೌಚಾಲಯದ ಯೋಜನೆಯು ಒಳಗೊಂಡಿದೆ.<br>• ದಿನಾಂಕ:15.08.2022ರಂದು ದೇಶದ 76ನೇ ಸ್ವಾತಂತ್ರ್ಯ | |

| | | |
|---|---|---|
| | | ದಿನಾಚರಣೆ ಪ್ರಯುಕ್ತ ಮಾನ್ಯ ಮುಖ್ಯಮಂತ್ರಿಗಳ ಘೋಷಣೆಯನ್ವಯ "ರಾಜ್ಯದ ಎಲ್ಲಾ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಲ್ಲಿ ಶೇ.100 ರಷ್ಟು ಶೌಚಾಲಯಗಳ ನಿರ್ಮಾಣದ ಗುರಿ ಸಾಧಿಸಲು ರೂ.250.00 ಕೋಟಿ ವೆಚ್ಚದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ವ್ಯಾಪ್ತಿಯ ಶಾಲಾ/ಕಾಲೇಜುಗಳಲ್ಲಿ ಶೌಚಾಲಯ ನಿರ್ಮಾಣ ಕಾರ್ಯ ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಇಪಿ 254 ಯೋಸಕ 2022. ದಿ:23.08.2022ರ ಮೂಲಕ ಆದೇಶ ಹೊರಡಿಸಲಾಗಿದೆ.(ಆದೇಶವನ್ನು **ಅನುಬಂಧ-3**ರಲ್ಲಿ ಲಗತ್ತಿಸಿದೆ) |

**ಇಪಿ:266 ಯೋಸಕ 2022**

(ಬಿ.ಸಿ.ನಾಗೇಶ್)
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

ಅನುಬಂಧ-1

# 2020-21ನೇ ಸಾಲಿನ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಇಲಾಖಾ ಅನುದಾನ ಒಗ್ಗೂಡಿಸುವಿಕೆ (Convergence) ಮೂಲಕ ಕೈಗೊಳ್ಳಬೇಕಾದ ಕಾಮಗಾರಿಗಳಿಗೆ ಜಿಲ್ಲಾವಾರು ಬಿಡುಗಡೆ ಮಾಡಲಾದ ಅನುದಾನದ ವಿವರ

| ಕ್ರ.ಸಂ | ಜಿಲ್ಲೆ | ಲೆಕ್ಕಶೀರ್ಷಿಕೆ/ಪ್ರಾಥಮಿಕ ಶಾಲಾ ಕಟ್ಟಡಗಳ ನಿರ್ವಹಣೆ (2202-01-053-0-01) | ಲೆಕ್ಕಶೀರ್ಷಿಕೆ/ಪ್ರೌಢ ಶಾಲಾ ಕಟ್ಟಡಗಳ ನಿರ್ವಹಣೆ (2202-02-053-0-01) | | | ರೂ.ಲಕ್ಷಗಳಲ್ಲಿ | |
|---|---|---|---|---|---|---|---|
| | | 200 | 059 | 422 | 423 | ಒಟ್ಟು | ಒಟ್ಟು ಮೊತ್ತ |
| 1 | BAGALKOT | 48.18 | 21.50 | 17.01 | 13.39 | 51.89 | 100.08 |
| 2 | BALLARI | 59.55 | 26.58 | 21.03 | 16.55 | 64.17 | 123.72 |
| 3 | BELAGAVI CHIKKODI | 66.33 | 21.04 | 16.64 | 13.10 | 50.78 | 117.11 |
| 4 | BELAGAVI | 51.44 | 15.03 | 11.89 | 9.36 | 36.27 | 87.71 |
| 5 | BENGALURU RURAL | 39.85 | 7.40 | 5.85 | 4.61 | 17.86 | 57.71 |
| 6 | BENGALURU U NORTH | 18.11 | 6.70 | 5.30 | 4.17 | 16.18 | 34.29 |
| 7 | BENGALURU U SOUTH | 31.96 | 9.94 | 7.86 | 6.19 | 23.99 | 55.96 |
| 8 | BIDAR | 46.07 | 19.19 | 15.18 | 11.95 | 46.31 | 92.39 |
| 9 | CHAMARAJANAGARA | 27.55 | 9.94 | 7.86 | 6.19 | 23.99 | 51.55 |
| 10 | CHIKKABALLAPURA | 53.11 | 12.83 | 10.15 | 7.99 | 30.97 | 84.08 |
| 11 | CHIKKAMANGALURU | 49.29 | 13.41 | 10.61 | 8.35 | 32.36 | 81.66 |
| 12 | CHITRADURGA | 60.81 | 13.06 | 10.33 | 8.13 | 31.53 | 92.34 |
| 13 | DAKSHINA KANNADA | 33.85 | 19.53 | 15.45 | 12.16 | 47.15 | 81.00 |
| 14 | DAVANAGERE | 39.92 | 15.37 | 12.16 | 9.57 | 37.11 | 77.03 |
| 15 | DHARWAD | 28.26 | 12.48 | 9.88 | 7.77 | 30.13 | 58.39 |
| 16 | GADAG | 22.74 | 13.06 | 10.33 | 8.13 | 31.53 | 54.27 |
| 17 | HASSAN | 82.07 | 27.85 | 22.04 | 17.35 | 67.24 | 149.31 |
| 18 | HAVERI | 42.89 | 16.30 | 12.89 | 10.15 | 39.34 | 82.23 |
| 19 | KALBURGI | 65.55 | 33.86 | 26.79 | 21.09 | 81.75 | 147.30 |
| 20 | KODAGU | 13.96 | 5.43 | 4.30 | 3.38 | 13.11 | 27.08 |
| 21 | KOLAR | 66.66 | 14.56 | 11.52 | 9.07 | 35.15 | 101.82 |
| 22 | KOPPAL | 35.48 | 18.72 | 14.81 | 11.66 | 45.20 | 80.68 |
| 23 | MANDYA | 59.11 | 24.73 | 19.57 | 15.40 | 59.71 | 118.82 |
| 24 | MYSURU | 70.07 | 26.81 | 21.22 | 16.70 | 64.73 | 134.80 |
| 25 | RAICHUR | 53.96 | 24.85 | 19.66 | 15.47 | 59.99 | 113.95 |
| 26 | RAMANAGARA | 46.00 | 12.37 | 9.78 | 7.70 | 29.85 | 75.85 |
| 27 | SHIVAMOGGA | 68.18 | 18.96 | 15.00 | 11.80 | 45.76 | 113.94 |
| 28 | MADHUGIRI | 46.63 | 10.98 | 8.69 | 6.84 | 26.51 | 73.13 |
| 29 | TUMAKURU | 74.55 | 15.26 | 12.07 | 9.50 | 36.83 | 111.38 |
| 30 | UDUPI | 21.78 | 12.25 | 9.69 | 7.63 | 29.57 | 51.35 |
| 31 | SIRSI | 41.33 | 8.55 | 6.77 | 5.33 | 20.65 | 61.98 |
| 32 | UTTARA KANNADA | 34.63 | 5.66 | 4.48 | 3.53 | 13.67 | 48.30 |
| 33 | VIJAYAPURA | 68.70 | 17.68 | 13.99 | 11.01 | 42.69 | 111.39 |
| 34 | YADAGIRI | 34.37 | 14.10 | 11.16 | 8.78 | 34.04 | 68.41 |
| | ಒಟ್ಟು | **1602.99** | **546.00** | **432.00** | **340.00** | **1318.00** | **2920.99** |

ಅನುಬಂಧ - ೨

**2021–22ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 4202–01–201–1–07–200(ಶೌಚಾಲಯ ನಿರ್ವಹಣೆ/ದುರಸ್ಥಿ) ರಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ದುರಸ್ಥಿ ಮತ್ತು ನಿರ್ಮಾಣಕ್ಕೆ ಜಿಲ್ಲಾವಾರು ಬಿಡುಗಡೆ ಮಾಡಲಾದ ಅನುದಾನದ ವಿವರ**

| ಕ್ರ.ಸಂ | ಜಿಲ್ಲೆ | ಬಿಡುಗಡೆಯಾದ ಅನುದಾನ ರೂ ಲಕ್ಷಗಳಲ್ಲಿ |
|---|---|---|
| 1 | BAGALKOT | 119.92 |
| 2 | BALLARI | 148.25 |
| 3 | BELAGAVI CHIKKODI | 140.32 |
| 4 | BELAGAVI | 105.10 |
| 5 | BENGALURU RURAL | 69.15 |
| 6 | BENGALURU U NORTH | 41.09 |
| 7 | BENGALURU U SOUTH | 67.05 |
| 8 | BIDAR | 110.70 |
| 9 | CHAMARAJANAGARA | 61.77 |
| 10 | CHIKKABALLAPURA | 100.75 |
| 11 | CHIKKAMANGALURU | 97.85 |
| 12 | CHITRADURGA | 110.64 |
| 13 | DAKSHINA KANNADA | 97.06 |
| 14 | DAVANAGERE | 92.30 |
| 15 | DHARWAD | 69.96 |
| 16 | GADAG | 65.02 |
| 17 | HASSAN | 178.91 |
| 18 | HAVERI | 98.53 |
| 19 | KALBURGI | 176.50 |
| 20 | KODAGU | 32.44 |
| 21 | KOLAR | 122.00 |
| 22 | KOPPAL | 96.67 |
| 23 | MANDYA | 142.37 |
| 24 | MYSURU | 161.52 |
| 25 | RAICHUR | 136.53 |
| 26 | RAMANAGARA | 90.89 |
| 27 | SHIVAMOGGA | 136.52 |
| 28 | MADHUGIRI | 87.63 |
| 29 | TUMAKURU | 133.46 |
| 30 | UDUPI | 61.53 |
| 31 | SIRSI | 74.26 |
| 32 | UTTARA KANNADA | 57.87 |
| 33 | VIJAYAPURA | 133.47 |
| 34 | YADAGIRI | 81.97 |
| | ಒಟ್ಟು | **3500.00** |

for

EP/254/YSK/2022-PLAN-EP-Sec ಅನುಬಂಧ-3

4586062/2022/EP-Planning Sec

1/303731/2022

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ದಿನಾಂಕ:15.08.2022ರಂದು ದೇಶದ 76ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಮಾನ್ಯ ಮುಖ್ಯಮಂತ್ರಿಯವರ ಘೋಷಣೆಯನ್ವಯ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1. ದಿನಾಂಕ:15.08.2022ರಂದು ದೇಶದ 76ನೇ ಸ್ವಾತಂತ್ರ್ಯ ದಿನಾಚರಣೆ ಭಾಷಣದ ಕಂಡಿಕೆ ಸಂಖ್ಯೆ: 73
2. ಸರ್ಕಾರದ ಆದೇಶ ಸಂಖ್ಯೆ:ಇಪಿ 87 ಯೋಯೋಕ 2022, ಬೆಂಗಳೂರು ದಿನಾಂಕ:27.04.2022
3. ಸರ್ಕಾರದ ಆದೇಶ ಸಂಖ್ಯೆ:ಇಪಿ 86 ಯೋಯೋಕ 2022, ಬೆಂಗಳೂರು ದಿನಾಂಕ:19.04.2022 ಹಾಗೂ ದಿನಾಂಕ:29.06.2022

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಭಾಷಣದ ಕಂಡಿಕೆ 73ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

"ರಾಜ್ಯದ ಎಲ್ಲಾ ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ ಶೇ.100ರಷ್ಟು ಶೌಚಾಲಯಗಳ ನಿರ್ಮಾಣವನ್ನು ರೂ.250.00ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುವುದು. ಆ ಮೂಲಕ ಶಾಲೆ, ಕಾಲೇಜುಗಳಲ್ಲಿ ಸ್ವಚ್ಛ-ಆರೋಗ್ಯಕರ ವಾತಾವರಣ ನಿರ್ಮಿಸಲಾಗುವುದು".

ಮೇಲೆ ಓದಲಾದ ಕ್ರಮಾಂಕ (2)ಮತ್ತು (3)ರ ಸರ್ಕಾರಿ ಆದೇಶಗಳಲ್ಲಿ ವಾರ್ಷಿಕ ಕ್ರಿಯಾಯೋಜನೆಗೆ ಅನುಮೋದನೆ ನೀಡಿ 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ :4202-01-201-1-07-200/133 (ಶೌಚಾಲಯ ನಿರ್ವಹಣೆ/ದುರಸ್ಥಿ)ರಡಿ ಒದಗಿಸಲಾದ ರೂ.50.00 ಕೋಟಿಗಳ ಅನುದಾನವನ್ನು ತ್ರೈಮಾಸಿಕವಾರು ಬಿಡುಗಡೆ ಮಾಡಲಾಗಿರುತ್ತದೆ.

ಹಂಚಿಕೆಯಾದ ಸೀಮಿತ ಅನುದಾನದಲ್ಲಿ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗುವುದಿಲ್ಲ. ಆದ್ದರಿಂದ, ಶಿಕ್ಷಣ ಇಲಾಖೆಯ ಅನುದಾನದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ನರೇಗಾ ಮುಂತಾದ ಬೇರೆ ಇಲಾಖೆಯ ಅನುದಾನದೊಂದಿಗೆ ಒಗ್ಗೂಡಿಸುವಿಕೆಯ (Convergence) ಮೂಲಕ ಅನುಷ್ಠಾನಗೊಳಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಪಿ 254 ಯೋಸಕ 2022, ಬೆಂಗಳೂರು,ದಿನಾಂಕ:23.08.2022

ದಿನಾಂಕ:15.08.2022ರಂದು ದೇಶದ 76ನೇ ಸ್ವಾತಂತ್ರ್ಯ ದಿನಾಚರಣೆ ಭಾಷಣದ ಕಂಡಿಕೆ ಸಂಖ್ಯೆ:73ರ ಘೋಷಣೆಯ ಕಾರ್ಯಕ್ರಮ ಅನುಷ್ಠಾನಗೊಳಿಸಲು ಮುಂದುವರೆದ ಕಾರ್ಯಕ್ರಮದಡಿಯಲ್ಲಿ ರೂ.250.00 ಕೋಟಿ ವೆಚ್ಚದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ವ್ಯಾಪ್ತಿಯ ಶಾಲಾ/ಕಾಲೇಜುಗಳಲ್ಲಿ ಶೌಚಾಲಯ ನಿರ್ಮಾಣ ಕಾರ್ಯ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ಉದ್ದೇಶಕ್ಕಾಗಿ 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:4202-01-201-1-07-200/133 (ಶೌಚಾಲಯ ನಿರ್ವಹಣೆ/ದುರಸ್ಥಿ)ರಡಿ ಹಂಚಿಕೆಯಾದ ರೂ.50.00ಕೋಟಿಗಳ ಅನುದಾನದಲ್ಲಿ ತ್ರೈಮಾಸಿಕವಾರು ಬಿಡುಗಡೆ ಮಾಡಲಾದ/ಮಾಡಲಾಗುವ ಅನುದಾನದಿಂದ ನಿಯಮಾನುಸಾರ ಭರಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರುಗಳಿಗೆ ಅನುಮತಿ ನೀಡಿದೆ.

ಸದರಿ ಕಾರ್ಯಕ್ರಮವನ್ನು ಶಿಕ್ಷಣ ಇಲಾಖೆಯ ಅನುದಾನದೊಂದಿಗೆ ಗರಿಷ್ಠ ಪ್ರಮಾಣದ ಶಾಲಾ ಕಾಲೇಜುಗಳಿಗೆ ವಿಸ್ತರಿಸಲು ಆಯಾ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನರೇಗಾ ಯೋಜನೆ ಹಾಗೂ ನಗರಾಭಿವೃದ್ಧಿ ಇಲಾಖೆಯ ಸ್ವಚ್ಛ ಭಾರತ ಮಿಷನ್(ಗ್ರಾಮೀಣ)ಮತ್ತು(ನಗರ) ಯೋಜನೆಗಳ ಅನುದಾನ ಹಾಗೂ ಸ್ಥಳೀಯವಾಗಿ ಜಾರಿಯಲ್ಲಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಅನುದಾನವನ್ನು ಒಗ್ಗೂಡಿಸುವಿಕೆ (Convergence) ಮೂಲಕ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಂಡು, ರೂ.250.00 ಕೋಟಿ ಅನುದಾನದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ರೂ.234.50 ಕೋಟಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ರೂ.15.50 ಕೋಟಿ ವೆಚ್ಚದಲ್ಲಿ ಶೌಚಾಲಯ ನಿರ್ಮಾಣ ಮಾಡಲು ವಿಶೇಷ ಅಭಿವೃದ್ಧಿ ಯೋಜನೆ ಹಾಗೂ ಸಾಮಾನ್ಯ ಯೋಜನೆಯಡಿ ಹಂಚಿಕೆಯಾದ ಅನುದಾನಕ್ಕೆ ಅನುಗುಣವಾಗಿ ಪ್ರತ್ಯೇಕವಾಗಿ ಶಾಲಾವಾರು/ಕಾಲೇಜುವಾರು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಹೆಚ್ಚುವರಿ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಸರ್ಕಾರಿ ಶಾಲೆ / ಪದವಿ ಪೂರ್ವ ಕಾಲೇಜುಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಹೆಚ್ಚು ದಾಖಲಾತಿ ಹೊಂದಿರುವ ಹಾಗೂ ನಿರ್ಧಿಷ್ಟವಾಗಿ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚು ಇರುವ ಶಾಲೆ/ ಪದವಿ ಪೂರ್ವ ಕಾಲೇಜುಗಳನ್ನು ಆಯ್ಕೆ ಮಾಡತಕ್ಕದ್ದು ಹಾಗೂ ಕಾಮಗಾರಿ ಅಗತ್ಯತೆ ಇರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

ಒದಗಿಸಲಾದ ಅನುದಾನದ ಮಿತಿಯೊಳಗೆ ಹಾಗೂ ಸರ್ಕಾರದಿಂದ ಯಾವುದೇ ಹೆಚ್ಚುವರಿ ಅನುದಾನ ಕೋರದಂತೆ, 2021-22ನೇ ಆರ್ಥಿಕ ಸಾಲಿನ ಅಂತ್ಯದೊಳಗೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

ಬಿಡುಗಡೆಯಾದ ಅನುದಾನಕ್ಕೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಕ್ತ ಲೆಕ್ಕ ಪತ್ರಗಳನ್ನು ಇಡತಕ್ಕದ್ದು.

ಸದರಿ ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಗಳ ವಿವರಗಳನ್ನು ತ್ರೈಮಾಸಿಕವಾರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸದರಿ ಕಾಮಗಾರಿಗಳನ್ನು ಕಾಲಮಿತಿ ಯೋಜನೆಯಾಗಿ ನಿರ್ವಹಿಸತಕ್ಕದ್ದು.

ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪ್ರಚಲಿತ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ-1999 ಹಾಗೂ ಅದರಡಿಯಲ್ಲಿ ಹೊರಡಿಸಲಾದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಭರಿಸಲಾದ ವೆಚ್ಚದ ವಿವರಗಳನ್ನು ಕಡ್ಡಾಯವಾಗಿ ಹೊಸ ಡಿಜಿಟಲ್ ಸಪೋರ್ಟ್ ಸಿಸ್ಟಂ (ಅವಲೋಕನ) ತಂತ್ರಾಂಶದಲ್ಲಿ ಇಂದೀಕರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 676 ವೆಚ್ಚ-8/2022, ದಿನಾಂಕ:23.08.2022ರ ಸಹಮತದನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್.ಡಿ 01 ಟಿ.ಎಫ್.ಪಿ 2022 ದಿನಾಂಕ:04.04.2022ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಹೆಚ್.ಗಿರಿಜಾ) 23/8/22
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

<u>ಇವರಿಗೆ;</u>

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳು
6. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
9. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
10. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
11. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ.

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.